# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 234 |
| 2 | ಸದಸ್ಯರ ಹೆಸರು | ಶ್ರೀ ಟಿ.ಎ.ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) |
| 3 | ವಿಷಯ | ಹೊಸದಾಗಿ ರಚನೆಯಾದ ತಾಲ್ಲೂಕು ಕೇಂದ್ರಗಳ ಕಾರ್ಯಾರಂಭದ ಕುರಿತು |
| 4 | ಉತ್ತರಿಸಬೇಕಾದ ದಿನಾಂಕ | 11.07.2018 |
| 5 | ಉತ್ತರಿಸುವ ಸಚಿವರು | ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ). | ರಾಜ್ಯಾದ್ಯಂತ ಹೊಸದಾಗಿ ರಚನೆಗೊಂಡಂತಹ ತಾಲ್ಲೂಕು ಕೇಂದ್ರಗಳ ಸಂಖ್ಯೆ ಎಷ್ಟು; ಮತ್ತು ಅವುಗಳು ಕಾರ್ಯಾರಂಭ ಮಾಡಿವೆಯೇ; | ರಾಜ್ಯದಲ್ಲಿ 50 ಹೊಸ ತಾಲ್ಲೂಕುಗಳನ್ನು ಜನವರಿ 2018 ರಿಂದ ಅನ್ವಯವಾಗುವಂತೆ ರಚಿಸಿ ಆದೇಶಿಸಲಾಗಿದೆ. ಅದರಂತೆ ಕಂದಾಯ ಇಲಾಖಾ ವತಿಯಿಂದ ತಾಲ್ಲೂಕು ಕಛೇರಿಗಳನ್ನು ಪ್ರಾರಂಭ ಮಾಡಲಾಗಿದೆ. |
| ಆ) | ತಾಲ್ಲೂಕು ಕೇಂದ್ರ ರಚನೆಯಾದ ಮೇಲೆ ಅವುಗಳಡಿಯಲ್ಲಿ ಎಷ್ಟು ಇಲಾಖೆಗಳು ಕರ್ತವ್ಯ ನಿರ್ವಹಿಸಬೇಕಾಗುತ್ತದೆ; ಅಂತಹ ಇಲಾಖೆಗಳು ಸದ್ಯ ಕಾರ್ಯಾರಂಭ ಮಾಡಲ್ಪಟ್ಟಿವೆಯೇ; ಇಲ್ಲವಾದಲ್ಲಿ, ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿವೆಯೇ; | ಶ್ರೀ ಎಂ.ಬಿ.ಪ್ರಕಾಶ್, ಅಧ್ಯಕ್ಷತೆಯಲ್ಲಿನ ತಾಲ್ಲೂಕು ಪುನರ್ ರಚನಾ ಸಮಿತಿ(2009)ಯು ನೀಡಿರುವ ವರದಿಯಲ್ಲಿ ಪ್ರತಿ ಹೊಸ ತಾಲ್ಲೂಕಿನಲ್ಲಿ 14 ಮುಖ್ಯವಾದ ಇಲಾಖೆಗಳು ಕಾರ್ಯ ನಿರ್ವಹಿಸುತ್ತಿರುತ್ತವೆ ಎಂದು ಗುರುತಿಸಿದೆ. ಪ್ರತಿ ತಾಲ್ಲೂಕಿನ ಅವಶ್ಯಕತೆಗೆ ಅನುಗುಣವಾಗಿ ಇಲಾಖೆಗಳು ಕಾರ್ಯನಿರ್ವಹಿಸುತ್ತವೆ.<br><br>ಪ್ರಸ್ತುತ ಹೊಸ ತಾಲ್ಲೂಕುಗಳಲ್ಲಿ ಕಂದಾಯ ಇಲಾಖಾ ಕಛೇರಿಗಳು ಕಾರ್ಯಾರಂಭ ಮಾಡಿದ್ದು, ಇತರೆ ಇಲಾಖಾ ಕಛೇರಿಗಳನ್ನು ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ಹಂತಹಂತವಾಗಿ ತೆರೆಯಲು ಸರ್ಕಾರದ ಅನುಮತಿ ನೀಡಲಾಗಿದೆ. |

| | | |
|---|---|---|
| ಇ) | ಹೊಸ ತಾಲ್ಲೂಕು ಕೇಂದ್ರದ ಕಛೇರಿಗಳಿಗೆ ಕಟ್ಟಡಗಳೂ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳು ಹಾಗೂ ಸಿಬ್ಬಂದಿಗಳನ್ನು ಒದಗಿಸ ಲಾಗಿದೆಯೇ; | ಹೊಸ ತಾಲ್ಲೂಕುಗಳಲ್ಲಿ ಕೆಲವು ಕಡೆ ಮಿನಿ ವಿಧಾನಸೌಧ ಕಟ್ಟಡ ಕಾಮಗಾರಿಗೆ ಸ್ಥಳ ಗುರುತಿಸಲಾಗಿದೆ. ಇನ್ನು ಕೆಲವು ಕಡೆ ಸ್ಥಳ ಗುರುತಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಹೊಸ ತಾಲ್ಲೂಕುಗಳ ಕಾರ್ಯಾರಂಭ ಮತ್ತು ಆಡಳಿತಾತ್ಮಕ ಪ್ರಕ್ರಿಯೆಯನ್ನು ಪ್ರಾರಂಭಿಸಲು ಪ್ರತಿ ತಾಲ್ಲೂಕಿಗೆ ರೂ.10.00 ಲಕ್ಷಗಳಂತೆ ಸಂಬಂಧಿಸಿದ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಅನುದಾನವನ್ನು ಬಿಡುಗಡೆ ಮಾಡಲಾಗಿದೆ ಹಾಗೂ ತಾಲ್ಲೂಕು ಕಛೇರಿಗೆ ಅವಶ್ಯವಿರುವ ಸಿಬ್ಬಂದಿಗಳನ್ನು ಸೃಜಿಸಲಾಗಿರುತ್ತದೆ ಅಲ್ಲದೆ ಅಧಿಕಾರಿ/ಸಿಬ್ಬಂದಿಗಳನ್ನು ಮುಂಬಡ್ತಿ ಮೂಲಕ ಹಾಗೂ ಹೆಚ್ಚುವರಿ ಪ್ರಭಾರದಲ್ಲಿಟ್ಟು ಕಾರ್ಯ ನಿರ್ವಹಿಸಲು ಕ್ರಮ ವಹಿಸಲಾಗಿದೆ. |
| ಈ) | ಹೊಸ ತಾಲ್ಲೂಕು ಕೇಂದ್ರಗಳಿಗೆ ಮೂಲಭೂತ ಸೌಲಭ್ಯಗಳಿಗಾಗಿ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು; ಮತ್ತು ಬಿಡುಗಡೆಯಾದ ಅನುದಾನದಲ್ಲಿ ಇದುವರೆಗೂ ಎಷ್ಟು ವೆಚ್ಚ ಮಾಡಲಾಗಿದೆ? (ಸಂಪೂರ್ಣವಾದ ಮಾಹಿತಿಯನ್ನು ನೀಡುವುದು) | ಹೊಸ ತಾಲ್ಲೂಕು ಕೇಂದ್ರಗಳಿಗೆ ಮಿನಿವಿಧಾನಸೌಧ ನಿರ್ಮಾಣ ಹಾಗೂ ಇತರೆ ಮೂಲ ಸೌಲಭ್ಯ ಒದಗಿಸುವ ಬಗ್ಗೆ ಸವಿವರ ಅಂದಾಜು ಪಟ್ಟಿಯೊಂದಿಗೆ ಸೂಕ್ತ ಪ್ರಸ್ತಾವನೆ ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಂದ ಸ್ವೀಕೃತವಾದ ನಂತರ ಪರಿಶೀಲಿಸಿ, ಹಣ ಬಿಡುಗಡೆ ಬಗ್ಗೆ ಕ್ರಮವಹಿಸಲಾಗುವುದು |

ಕಂಇ 69 ಭೂದಾಮು 2018

ಆರ್.ವಿ.ದೇಶಪಾಂಡೆ
ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ
ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು